ಬೆಂಗಳೂರು ನಗರ
ಸಂಚಾರ ಪೊಲೀಸ್

## ಪತ್ರಿಕಾ ಪ್ರಕಟಣೆ

******

## ವಾಹನ ದಟ್ಟಣೆ ತಡೆಗಟ್ಟಲು ಹೆಬ್ಬಾಳ ಜಂಕ್ಷನ್‌ನಲ್ಲಿ ಕೈಗೊಳ್ಳಲಿರುವ ಕೆಲವು ಕ್ರಮಗಳು

ಹೆಬ್ಬಾಳ ಜಂಕ್ಷನ್‌ನಲ್ಲಿ ಉಂಟಾಗುತ್ತಿರುವ ವಾಹನ ದಟ್ಟಣೆಯ ಸಮಸ್ಯೆ ನಿವಾರಣೆಗೆ ಅಧ್ಯಯನವನ್ನು ಮಾಡಲಾಗಿದ್ದು, ಬೆಂಗಳೂರು ಸಂಚಾರ ಪೊಲೀಸ್, ಬಿಬಿಎಂಪಿ, ಬಿಎಂಆರ್‌ಸಿಎಲ್, ಎನ್‌ಹೆಚ್‌ಎಐ ಮುಂತಾದ ಇಲಾಖೆಗಳ ಸಹಯೋಗ ಮತ್ತು ಸಮನ್ವಯದೊಡನೆ ಕೆಳಕಂಡ ಕ್ರಮಗಳನ್ನು ಕೈಗೊಳ್ಳಲು ಉದ್ದೇಶಿಸಲಾಗಿದೆ. ಈ ಜಂಕ್ಷನ್‌ನಲ್ಲಿರುವ ವಾಹನಗಳ ಹರಿವಿನ ಅಧ್ಯಯನ, ದತ್ತಾಂಶ ಮತ್ತು ವಾಹನ ದಟ್ಟಣೆಗೆ ಕಾರಣವಾಗುವ ಅಂಶಗಳ ಪರಿಶೀಲಿಸಿ, ಕೆಲವು ಬದಲಾವಣೆಗಳನ್ನು ಮಾಡಲು ಉದ್ದೇಶಿಸಲಾಗಿದೆ.

### ವಾಹನಗಳ ಹರಿವಿನಲ್ಲಿ ಬದಲಾವಣೆ

1. ಯಲಹಂಕ/ಕೊಡಿಗೇಹಳ್ಳಿ/ಕೆಂಪಾಪುರ/ಜಕ್ಕೂರು ಇತ್ಯಾದಿ ಕಡೆಗಳಿಂದ ಸರ್ವಿಸ್ ರಸ್ತೆಯ ಮೂಲಕ ನಗರಕ್ಕೆ ಹೋಗುವ ವಾಹನಗಳು ಹೆಬ್ಬಾಳ ಫ್ಲೈ ಓವರ್‌ಗೆ ಪ್ರವೇಶಿಸಲು ನೇರವಾಗಿ ಹೆಬ್ಬಾಳ ಫ್ಲೈ ಓವರ್ ಪ್ರವೇಶಿಸುವಂತಿಲ್ಲ. ಹೆಬ್ಬಾಳ ಸರ್ಕಲ್‌ನಲ್ಲಿರುವ ಲೂಪ್ ರ್‍ಯಾಂಪ್‌ಅನ್ನು ಬಳಸಿ, ನಗರಕ್ಕೆ ಬರಲು ಅನುವು ಮಾಡಿಕೊಡಲಾಗುವುದು.

2. ಏರ್‌ಪೋರ್ಟ್‌ನ ಏಲಿವೇಟೆಡ್ ಕಾರಿಡಾರ್‌ನಿಂದ ಬೆಂಗಳೂರು ನಗರದ ಕಡೆಗೆ ಬರುವ ಬಸ್‌ಗಳು ಹೆಬ್ಬಾಳ ಸರ್ಕಲ್‌ನಲ್ಲಿ ಬಸ್ ಪ್ರಯಾಣಿಕರನ್ನು ನಿಗದಿಪಡಿಸಿದ ಬಸ್ ಬೇ ನಲ್ಲಿ ಲೂಪ್‌ರ್‍ಯಾಂಪ್‌ಗಿಂತ ಮುಂಚಿತವಾಗಿ ಹತ್ತಿಸಿಕೊಳ್ಳುವುದು.

3. ಏರ್‌ಪೋರ್ಟ್ ಎಕ್ಸ್‌ಪ್ರೆಸ್ ಹೆದ್ದಾರಿಯಿಂದ ನಗರಕ್ಕೆ ಚಲಿಸುವ ವಾಹನಗಳು ಮೊದಲಿನಂತೆ ಹೆಬ್ಬಾಳ ಫ್ಲೈ ಓವರ್ ಮೂಲಕ ನಗರ ಪ್ರವೇಶಿಸುವುದು.

4. ಏರ್‌ಪೋರ್ಟ್ ಎಕ್ಸ್‌ಪ್ರೆಸ್ ಹೆದ್ದಾರಿಯಿಂದ ಕೆ.ಆರ್ ಪುರಂ, ತುಮಕೂರು ಕಡೆಗೆ ಚಲಿಸುವವರು ಮೊದಲಿನಂತೆ ಸರ್ವಿಸ್ ರಸ್ತೆ ಮೂಲಕ ಹೋಗಲು ಅನುವು ಮಾಡಿಕೊಡಲಾಗುವುದು.

5. ಏರ್‌ಪೋರ್ಟ್ ಎಕ್ಸ್‌ಪ್ರೆಸ್ ಹೆದ್ದಾರಿ ಮೂಲಕ ಕೆಂಪಾಪುರಕ್ಕೆ ಹೋಗುವವರು ವಿದ್ಯಾಶಿಲ್ಪ/ಯಲಹಂಕ ಬೈಪಾಸ್ ಬಳಿ ಸರ್ವಿಸ್ ರಸ್ತೆಯನ್ನು ಬಳಸುವುದು.

6. ಇದಕ್ಕೆ ಪೂರಕವಾಗಿ ಹೆಚ್ಚಿನ ಸಿಬ್ಬಂದಿ ನಿಯೋಜಿಸಲಾಗುವುದು ಮತ್ತು ಸೂಚನಾ ಫಲಕಗಳನ್ನು ಹಾಕಲಾಗುವುದು. ಈ ವ್ಯವಸ್ಥೆಯನ್ನು ದಿನಾಂಕ: ೦8-07-2022 ರ ಶುಕ್ರವಾರ ಬೆಳಗ್ಗೆ 6-00 ಗಂಟೆಯಿಂದ ಪ್ರಾರಂಭಿಸಲು ಉದ್ದೇಶಿಸಲಾಗಿದೆ.

7. ಹೆಬ್ಬಾಳ ಜಂಕ್ಷನ್‌ನಲ್ಲಿ ಬಸ್‌ಗಳ ನಿಲುಗಡೆ ಸ್ಥಳ ಬದಲಾವಣೆ, ಪಾದಚಾರಿಗಳಿಗೆ ರಸ್ತೆ ದಾಟಲು ಅನುಕೂಲತೆ ಅಡ್ಡಾದಿಡ್ಡಿ ಬಸ್ ನಿಲುಗಡೆಯ ನಿಷೇಧ ಮುಂತಾದ ಕ್ರಮಗಳನ್ನು ಹಂತಹಂತವಾಗಿ ಕೈಗೊಳ್ಳಲು ಉದ್ದೇಶಿಸಿದೆ.